ಎಫೆಸದವರಿಗೆ 2:2 ನೀವು ಪೂರ್ವದಲ್ಲಿ ಅಪರಾಧ ಗಳನ್ನೂ ಪಾಪಗಳನ್ನೂ ಮಾಡುವವರಾಗಿದ್ದು ಇಹ ಲೋಕಾಚಾರಕ್ಕೆ ಅನುಸಾರವಾಗಿ ನಡೆದುಕೊಂಡಿರಿ; ವಾಯುಮಂಡಲದಲ್ಲಿ ಅಧಿಕಾರ ನಡಿಸುವ ಅಧಿಪತಿಗೆ ಅಂದರೆ ಅವಿಧೇಯತೆಯ ಮಕ್ಕಳಲ್ಲಿ ಈಗ ಕೆಲಸ ನಡಿಸುವ ಆತ್ಮನಿಗನುಸಾರವಾಗಿ ನಡೆದುಕೊಂಡಿರಿ;

ಮತ್ತಾಯನು 6:10 ನಿನ್ನ ಚಿತ್ತವು ಪರಲೋಕದಲ್ಲಿ ನೆರವೇರು ವಂತೆ ಭೂಲೋಕದಲ್ಲಿಯೂ ನೆರವೇರಲಿ.

ಲೂಕನು 22:42 ತಂದೆಯೇ, ನಿನ್ನ ಚಿತ್ತವಿದ್ದರೆ ಈ ಪಾತ್ರೆ ಯನ್ನು ನನ್ನಿಂದ ತೊಲಗಿಸು; ಹೇಗೂ ನನ್ನ ಚಿತ್ತವಲ್ಲ, ಆದರೆ ನಿನ್ನ ಚಿತ್ತದಂತೆಯೇ ಆಗಲಿ ಎಂದು ಪ್ರಾರ್ಥಿಸಿ ದನು.

ಯೋಹಾನನು 16:7-9 ಆದರೂ ನಾನು ನಿಮಗೆ ಸತ್ಯವನ್ನು ಹೇಳುತ್ತೇನೆ; ನಾನು ಹೋಗುವದು ನಿಮಗೆ ಹಿತಕರವಾಗಿದೆ; ಯಾಕಂದರೆ ನಾನು ಹೋಗದಿದ್ದರೆ ಆದರಿಕನು ನಿಮ್ಮ ಬಳಿಗೆ ಬರುವದಿಲ್ಲ; ನಾನು ಹೋದರೆ ಆತನನ್ನು ನಿಮ್ಮ ಬಳಿಗೆ ಕಳುಹಿಸುವೆನು. 8 ಆತನು ಬಂದಾಗ ಪಾಪ ನೀತಿ ನ್ಯಾಯ ತೀರ್ವಿಕೆಯ ವಿಷಯಗಳಲ್ಲಿಯೂ 9 ಅವರು ನನ್ನನ್ನು ನಂಬದೆ ಇರುವದರಿಂದ ಪಾಪದ ವಿಷಯವಾಗಿಯೂ

2 ತಿಮೊಥೆಯನಿಗೆ 2:10 ಆದ ಕಾರಣ (ದೇವರು) ಆರಿಸಿಕೊಂಡವರು ಸಹ ಕ್ರಿಸ್ತ ಯೇಸುವಿನಲ್ಲಿರುವ ರಕ್ಷಣೆಯನ್ನು ನಿತ್ಯಪ್ರಭಾವ ಸಹಿತವಾಗಿ ಹೊಂದಬೇಕೆಂದು ನಾನು ಅವರಿಗೋಸ್ಕರ ಎಲ್ಲವನ್ನೂ ತಾಳಿಕೊಳ್ಳುತ್ತೇನೆ.

ರೋಮಾಪುರದವರಿಗೆ 15:20,21 ಹೌದು, ಬೇರೆಯವನ ಅಸ್ತಿವಾರದ ಮೇಲೆ ನಾನು ಕಟ್ಟದಂತೆ ಕ್ರಿಸ್ತನ ಹೆಸರು ತಿಳಿಸದಿರುವ ಕಡೆಯಲ್ಲಿ ನಾನು ಸುವಾರ್ತೆಯನ್ನು ಸಾರುವದಕ್ಕೆ ಪ್ರಯಾಸ ಪಟ್ಟಿದ್ದೇನೆ. 21 ಆದರೆ ಬರೆಯಲ್ಪಟ್ಟಂತೆ--ಯಾರಿಗೆ ಆತನ

ವಿಷಯವಾಗಿ ಹೇಳಲಿಲ್ಲವೋ ಅವರು ನೋಡುವರು; ಯಾರು ಕೇಳಲಿಲ್ಲವೋ ಅವರು ಗ್ರಹಿಸುವರು ಎಂಬದೇ.

ಅಪೊಸ್ತಲರ ಕೃತ್ಯಗ 2:36,37 ಆದದರಿಂದ ನೀವು ಶಿಲುಬೆಗೆ ಹಾಕಿದ ಈ ಯೇಸುವನ್ನೇ ದೇವರು ಕರ್ತನನ್ನಾಗಿಯೂ ಕ್ರಿಸ್ತನನ್ನಾಗಿಯೂ ಮಾಡಿದ್ದಾನೆಂದು ಇಸ್ರಾಯೇಲ್ ಮನೆತನದವರೆಲ್ಲರಿಗೂ ನಿಶ್ಚಯವಾಗಿ ತಿಳಿದಿರಲಿ ಎಂದು ಹೇಳಿದನು. 37 ಅವರು ಇದನ್ನು ಕೇಳಿ ತಮ್ಮ ಹೃದಯದಲ್ಲಿ ತಿವಿಯಲ್ಪಟ್ಟವರಾಗಿ ಪೇತ್ರನಿಗೂ ಉಳಿದ ಅಪೊಸ್ತಲರಿಗೂ--ಜನರೇ, ಸಹೋದರರರೇ, ನಾವು ಏನು ಮಾಡಬೇಕು ಎಂದು ಕೇಳಿದರು.

ಇಬ್ರಿಯರಿಗೆ 4:2 ಅವರಿಗೆ ಸುವಾರ್ತೆಯು ಸಾರೋಣವಾದಂತೆಯೇ ನಮಗೂ ಸಾರೋಣವಾಯಿತು; ಆದರೆ ಕೇಳಿದವರು ನಂಬಲಿಲ್ಲವಾದ ಕಾರಣ ಸಾರಿದ ಆ ವಾಕ್ಯದಿಂದ ಅವರಿಗೆ ಪ್ರಯೋಜನವಾಗಲಿಲ್ಲ.

ಯೆರೆಮಿಯ 24:7 ನಾನೇ ಕರ್ತನೆಂದು ನನ್ನನ್ನು ತಿಳುಕೊಳ್ಳುವದಕ್ಕೆ ಅವರಿಗೆ ಹೃದಯವನ್ನು ಕೊಡುವೆನು. ಅವರು ನನ್ನ ಜನರಾಗಿ ರುವರು; ನಾನು ಅವರ ದೇವರಾಗಿರುವೆನು; ತಮ್ಮ ಪೂರ್ಣ ಹೃದಯದಿಂದ ನನ್ನ ಬಳಿಗೆ ಹಿಂತಿರುಗಿಕೊಳ್ಳು ವರು.

ಅಪೊಸ್ತಲರ ಕೃತ್ಯಗ 16:14 ದೇವರನ್ನು ಆರಾಧಿಸು ತ್ತಿದ್ದವಳೂ ಥುವತ್ತೈರ ಪಟ್ಟಣದವಳೂ ಧೂಮ್ರ ವರ್ಣದ ವಸ್ತ್ರಗಳನ್ನು ಮಾರುತ್ತಿದ್ದವಳೂ ಆದ ಲುದ್ಯ ಳೆಂಬ ಹೆಸರುಳ್ಳ ಒಬ್ಬ ಸ್ತ್ರೀಯು ನಮ್ಮ ಮಾತುಗಳನ್ನು ಕೇಳುತ್ತಿದ್ದಳು. ಕರ್ತನು ಆಕೆಯ ಹೃದಯವನ್ನು ತೆರದ ದ್ದರಿಂದ ಪೌಲನು ಹೇಳಿದ ಮಾತುಗಳಿಗೆ ಆಕೆಯು ಲ

ಮತ್ತಾಯನು 13:14,15 ಹೀಗೆ ಯೆಶಾಯನ ಪ್ರವಾದನೆಯು ಅವರಲ್ಲಿ ನೆರವೇರಿತು. ಅದೇನಂದರೆ -- ನೀವು ಕೇಳುತ್ತೀರಿ, ಕೇಳಿದರೂ ತಿಳು ಕೊಳ್ಳುವದೇ ಇಲ್ಲ; ಮತ್ತು ನೋಡುತ್ತೀರಿ, ನೋಡಿ ದರೂ ಗ್ರಹಿಸುವದೇ ಇಲ್ಲ. 15 ಯಾಕಂದರೆ ಇವರು ತಮ್ಮ

ಕಣ್ಣುಗಳಿಂದ ನೋಡಿ ತಮ್ಮ ಕಿವಿಗಳಿಂದ ಕೇಳಿ ಹೃದಯದಿಂದ ಗ್ರಹಿಸಿ ಮಾರ್ಪಾಟು ಹೊಂದದ ಹಾಗೆಯೂ ನಾನು ಇವರನ್ನು ಸ್ವಸ್ಥಮಾಡದಂತೆಯೂ ಈ ಜನರ ಹೃದಯವು ಕೊಬ್ಬೇರಿತು; ಮತ್ತು ಇವರ ಕಿವಿಗಳು ಕೇಳದ ಹಾಗೆ ಮಂದವಾದವು; ಇದಲ್ಲದೆ ಇವರು ತಮ್ಮ ಕಣ್ಣುಗ

ಯೆಶಾಯ 6:9,10 ಅದಕ್ಕೆ ಆತನು -- ನೀನು ಈ ಜನರ ಬಳಿಗೆ ಹೋಗಿ -- ನೀವು ಕಿವಿಯಾರೆ ಕೇಳಿದರೂ ತಿಳಿಯಬಾರದೆಂದೂ ಕಣ್ಣಾರೆ ಕಂಡರೂ ಅದನ್ನು ಗ್ರಹಿಸಬಾರದೆಂದೂ ತಿಳಿಸು. 10 ತಮ್ಮ ಕಣ್ಣುಗಳಿಂದ ನೋಡದಂತೆಯೂ ತಮ್ಮ ಕಿವಿಗಳಿಂದ ಕೇಳದಂತೆಯೂ ತಮ್ಮ ಹೃದಯದಿಂದ ಗ್ರಹಿಸಿ ತಿರುಗಿಕೊಂಡು ಸ್ವಸ್ಥವಾಗ ದಂತೆಯೂ ಈ ಜನರ ಹೃದಯವನ್ನು ಕೊಬ್ಬಿಸಿ ಕಿವಿ ಯನ್ನು ಮಂದಗೊಳಿಸಿ ಅವರ ಕಣ್ಣುಗಳನ್ನು ಮುಚ್ಚು ಎಂದು ನನಗೆ ಹೇಳಿದನು.

ಮಾರ್ಕನು 4:11,12 ಅದಕ್ಕೆ ಆತನು ಅವರಿಗೆ--ದೇವರ ರಾಜ್ಯದ ಮರ್ಮವನ್ನು ತಿಳಿದುಕೊಳ್ಳಲು ನಿಮಗೆ ಕೊಡಲ್ಪಟ್ಟಿದೆ. ಆದರೆ ಹೊರಗಿನವರಿಗೆ ಇವೆಲ್ಲವುಗಳು ಸಾಮ್ಯಗಳಿಂದ ಹೇಳಲ್ಪಡುತ್ತವೆ. 12 ಯಾಕಂದರೆ ಅವರು ದೃಷ್ಟಿಯಿ ದ್ದರೂ ನೋಡಿ ತಿಳುಕೊಳ್ಳದಂತೆ ಕೇಳಿದರೂ ಕೇಳಿ ಗ್ರಹಿಸದಂತೆ ಮತ್ತು ಅವರು ತಿರುಗಿಕೊಂಡು ತಮ್ಮ ಪಾಪಗಳಿಂದ ಕ್ಷಮಿಸಲ್ಪಡದಂತೆ ಆಗುವದು.

ಯೋಹಾನನು 12:39,40 ಅವರು ನಂಬಲಾರದೆ ಇದ್ದದರಿಂದ ಯೆಶಾಯನು ತಿರಿಗಿ ಹೇಳಿದ್ದೇನಂದರೆ-- 40 ಅವರು ಕಣ್ಣಿನಿಂದ ಕಾಣದೆ ಹೃದಯದಿಂದ ಗ್ರಹಿಸದೆ ಮತ್ತು ತಿರುಗಿಕೊಂಡು ನನ್ನಿಂದ ಸ್ವಸ್ಥತೆಯನ್ನು ಹೊಂದದೆ ಇರುವಂತೆ ಆತನು ಅವರ ಕಣ್ಣುಗಳನ್ನು ಕುರುಡು ಮಾಡಿ ಅವರ ಹೃದಯವನ್ನು ಕಠಿಣ ಮಾಡಿದನು ಎಂಬದು.

ರೋಮಾಪುರದವರಿಗೆ 11:7,8 ಹಾಗಾದರೇನು? ಇಸ್ರಾ ಯೇಲ್ಯರು ತಾವು ಹುಡುಕಿದ್ದನ್ನು ಹೊಂದಿಕೊಳ್ಳಲಿಲ್ಲ; ಆದರೆ ಆಯ್ಕೆಯಾದವರು ಅದನ್ನು ಹೊಂದಿಕೊಂಡರು. 8 (ಬರೆದಿರುವಂತೆ ದೇವರು ಅವರಿಗೆ ತೂಕಡಿಕೆಯ ಆತ್ಮವನ್ನೂ

ಕಾಣದ ಕಣ್ಣುಗಳನ್ನೂ ಕೇಳದ ಕಿವಿಗಳನ್ನೂ ಕೊಟ್ಟಿದ್ದಾನೆ). ಉಳಿದವರು ಈ ದಿನದ ವರೆಗೂ ಕುರುಡರಾಗಿದ್ದಾರೆ.

2 ಥೆಸಲೊನೀಕದವರಿಗೆ 2:10,11 ದುರ್ನೀತಿಯ ಎಲ್ಲಾ ವಂಚನೆ ಯಿಂದಲೂ ಕೂಡಿ ನಾಶವಾಗುವವರಲ್ಲಿ ಸಂಭವಿಸು ವದು; ಅವರು ಪ್ರೀತಿಯ ಸತ್ಯವನ್ನು ಅಂಗೀಕರಿಸದ ಕಾರಣ ರಕ್ಷಣೆಯನ್ನು ಹೊಂದುವದಿಲ್ಲ. 11 ಇದೇ ಕಾರಣದಿಂದ ದೇವರು ಬಲವಾದ ಭ್ರಮೆಯನ್ನು ಅವರಲ್ಲಿಗೆ ಕಳುಹಿಸಿ ಅವರು ಆ ಸುಳ್ಳನ್ನು ನಂಬುವಂತೆ ಮಾಡುತ್ತಾನೆ.

ಮತ್ತಾಯನು 13:18-23 ಆದದರಿಂದ ಬಿತ್ತುವವನ ಸಾಮ್ಯದ ವಿಷಯವಾಗಿ ನೀವು ಕೇಳಿರಿ: 19 ಯಾವನಾದರೂ ರಾಜ್ಯದ ವಾಕ್ಯವನ್ನು ಕೇಳಿ ಗ್ರಹಿಸದೆ ಇರುವಾಗ ಕೆಡುಕನು ಬಂದು ಅವನ ಹೃದಯದಲ್ಲಿ ಬಿತ್ತಿದ್ದನ್ನು ತೆಗೆದು ಬಿಡು ವನು; ದಾರಿಯ ಮಗ್ಗುಲಲ್ಲಿ ಬೀಜವನ್ನು ಅಂಗೀಕರಿ ಸಿದವನು ಇವನೇ. 20 ಮತ್ತು ಬಂಡೆಯ ಸ್ಥಳಗಳಲ್ಲಿ ಬೀಜವನ್ನು ಅಂಗೀಕರಿಸಿದವನು ಇವನೇ; ಇವನು ವಾಕ್ಯವನ್ನು ಕೇಳಿದ ಕೂಡಲೆ ಸಂತೋಷದಿಂದ ಅದನ್ನು ಅಂಗೀಕರಿಸುತ್ತಾನೆ; 21 ಆದರೂ ಅವನಲ್ಲಿ ಬೇರಿಲ್ಲದ ಕಾರಣ ಸ್ವಲ್ಪಕಾಲ ಮಾತ್ರ ಇರುವನು; ಯಾಕಂದರೆ ವಾಕ್ಯಕ್ಕಾಗಿ ಸಂಕಟ ಇಲ್ಲವೆ ಹಿಂಸೆ ಬಂದಾಗ ತಕ್ಷಣವೇ ಅವನು ಅಭ್ಯಂತರ ಪಡುವನು. 22 ಮುಳ್ಳುಗಳಲ್ಲಿ ಬೀಜವನ್ನು ಅಂಗೀಕರಿಸಿದವನು ಸಹ ಇವನೇ; ಇವನು ವಾಕ್ಯವನ್ನು ಕೇಳುತ್ತಾನೆ; ಆದರೆ ಈ ಪ್ರಪಂಚದ ಚಿಂತೆಯೂ ಐಶ್ವರ್ಯದ ಮೋಸವೂ ವಾಕ್ಯವನ್ನು ಅಡಗಿಸುವ ದರಿಂದ ಅವನು ಫಲ ಕೊಡಲಾರನು. 23 ಆದರೆ ಒಳ್ಳೇ ಭೂಮಿಯಲ್ಲಿ ಬೀಜ ವನ್ನು ಅಂಗೀಕರಿಸಿದವನು ಇವನೇ; ಇವನು ವಾಕ್ಯ ವನ್ನು ಕೇಳಿ ಅದನು ಗ್ರಹಿಸುತ್ತಾನೆ; ಇವನೇ ಫಲಫಲಿ ಸುವವನಾಗಿ ನೂರರಷ್ಟು ಅರವತ್ತರಷ್ಟು ಮತ್ತು ಮೂವತ್ತರಷ್ಟು ಫಲವನ್ನು ಕೊಡುತ್ತಾನೆ.

2 ಕೊರಿಂಥದವರಿಗೆ 3:15,16 ಆದರೆ ಈ ದಿನದವರೆಗೂ ಮೋಶೆಯ ಗ್ರಂಥಪಾರಾಯಣವು ಆಗುವಾಗೆಲ್ಲಾ ಮುಸುಕು ಅವರ ಹೃದಯದ ಮೇಲೆ ಇರುತ್ತದೆ.

16 ಆದಾಗ್ಯೂ ಅವರ ಹೃದಯವು ಕರ್ತನ ಕಡೆಗೆ ತಿರುಗಿಕೊಂಡಾಗಲೇ ಆ ಮುಸುಕು ತೆಗೆಯಲ್ಪಡುವದು.

ಯೆಶಾಯ 30:28 ಆತನ ಶ್ವಾಸವು ತುಂಬಿ ತುಳುಕಿ ಕಂಠದ ವರೆಗೂ ಏರುವ ತೊರೆಯಂತಿದೆ; ಜನಾಂಗಗಳನ್ನು ಏನೂ ಉಳಿಸದ ಜಲ್ಲಡಿಯಿಂದ ಜಾಲಿಸುವದಕ್ಕೆ ಬರು ತ್ತಾನೆ; ದಾರಿತಪ್ಪಿಸುವ ಕಡಿವಾಣವು ಜನಗಳ ದವಡೆ ಗಳಲ್ಲಿರುವದು.

ಹೋಶೇ 11:3-7 ನಾನು ಅವರ ತೋಳುಗಳನ್ನು ಹಿಡಿದು ಎಫ್ರಾಯಾಮನಿಗೆ ಕಲಿಸಿದೆನು. ಆದರೆ ನಾನು ಅವ ರನ್ನು ಸ್ವಸ್ಥಮಾಡಿದ್ದೇನೆಂದು ಅವರಿಗೆ ತಿಳಿಯಲಿಲ್ಲ.
4 ನಾನು ಅವರನ್ನು ಮನುಷ್ಯನ ಸ್ನೇಹಬಂದನವೆಂಬ ಹಗ್ಗಗಳಿಂದಲೂ ಪ್ರೀತಿಯ ಬಂಧನಗಳಿಂದಲೂ ಎಳೆ ದೆನು. ಅವರ ದವಡೆಯ ಮೇಲಿನಿಂದ ನೊಗ ಎತ್ತು ವವರ ಹಾಗೆ ನಾನು ಅವರಿಗೆ ಇದ್ದೆನು. ನಾನು ಅವರಿಗೆ ತಿನ್ನುವದಕ್ಕೆ ಕೊಟ್ಟೆನು. 5 ಅವನು ಐಗುಪ್ತ ದೇಶದೊಳಗೆ ಹಿಂತಿರುಗಿ ಬರಲಾರನು; ಆದರೆ ಅಶ್ಯೂರ್ಯನು ಅವನ ರಾಜನಾಗಿದ್ದಾನೆ. ಅವರು ತಿರುಗಿ ಬರುವದಕ್ಕೆ ನಿರಾಕರಿಸಿದರು. 6 ಆದದರಿಂದ ಅವರ ಆಲೋಚನೆಗಳ ನಿಮಿತ್ತ ಕತ್ತಿಯು ಅವರ ಪಟ್ಟಣಗಳ ಮೇಲೆ ನೆಲೆಯಾಗಿದ್ದು ಅಲ್ಲಿನ ಕೊಂಬೆ ಗಳನ್ನು ಸುಟ್ಟು ಅವರನ್ನು ನುಂಗಿಬಿಡುತ್ತದೆ. 7 ನನ್ನ ಜನರು ನನ್ನ ಕಡೆಯಿಂದ ಹಿಂಜರಿಯಬೇಕೆಂದು ತೀರ್ಮಾನಿಸಿದ್ದಾರೆ; ಅವರನ್ನು ಮಹೋನ್ನತನ ಬಳಿಗೆ ಕರೆದರೂ ಒಬ್ಬನಾದರೂ ಆತನನ್ನು ಉನ್ನತ ಪಡಿಸಲಾರನು.

ಅಪೊಸ್ತಲರ ಕೃತ್ಯಗ 26:18 ಅವರ ಕಣ್ಣುಗಳನ್ನು ತೆರೆಯುವದಕ್ಕೂ ಮತ್ತು ಕತ್ತಲೆಯಿಂದ ಬೆಳಕಿಗೂ ಸೈತಾನನ ಅಧಿಕಾರದಿಂದ ದೇವರ ಕಡೆಗೆ ಅವರನ್ನು ತಿರುಗಿಸುವದಕ್ಕೂ ಅವರು ನನ್ನಲ್ಲಿ ಇಡುವ ನಂಬಿಕೆಯಿಂದಾಗುವ ಪಾಪಕ್ಷಮಾ ಪಣೆಯನ್ನೂ ಪವಿತ್ರರಾದವರಲ್ಲಿ ಸ್ವಾಸ್ಥ್ಯವನ್ನೂ ಹೊಂದುವಂತೆ ಮಾಡುವದಕ್ಕಾಗಿ ನಾನು

2 ತಿಮೊಥೆಯನಿಗೆ 2:24-26  ಕರ್ತನ ಸೇವ ಕನು ಜಗಳವಾಡದೆ ಎಲ್ಲರ ವಿಷಯದಲ್ಲಿ

ಸಾಧುವೂ ಬೋಧಿಸುವದರಲ್ಲಿ ಪ್ರವೀಣನೂ ತಾಳ್ಮೆಯುಳ್ಳವನೂ ಆಗಿರಬೇಕು. 25 ಎದುರಿಸುವವರನ್ನು ಸಾತ್ವಿಕತ್ವದಿಂದ ತಿದ್ದುವವನು ಆಗಿರಬೇಕು. ಒಂದು ವೇಳೆ ದೇವರು ಆ ಎದುರಿಸುವವರಲ್ಲಿ ಪಶ್ಚಾತ್ತಾಪವನ್ನುಂಟುಮಾಡಿ ಸತ್ಯದ ತಿಳುವಳಿಕೆಯನ್ನು ಅವರಿಗೆ ಕೊಟ್ಟಾನು. 26 ಸೈತಾ ನನ ಉರ್ಲಿಗೆ ಬಿದ್ದು ಅವನ ಇಷ್ಟದಿಂದ ಸೆರೆ ಒಯ್ಯಲ್ಪಟ್ಟವರಾದ ಇವರು ಒಂದು ವೇಳೆ ಎಚ್ಚೆತ್ತಾರು.

ಪ್ರಕಟನೆ 3:17-19 ನೀನು--ನಾನು ಐಶ್ವರ್ಯವಂತನು, ಧನವೃದ್ಧಿಯುಳ್ಳವನು, ಯಾವದರ ಲ್ಲಿಯೂ ಕೊರತೆಯಿಲ್ಲದವನು ಎಂದು ಹೇಳಿಕೊಳ್ಳುತ್ತೀ; ಆದರೆ ನೀನು ಕೇವಲ ನಿರ್ಗತಿಕನು, ದರಿದ್ರನು, ಬಡವನು, ಕುರುಡನು, ಬೆತ್ತಲೆಯಾದವನು ಆಗಿರುವ ದನ್ನು ತಿಳಿಯದೆ ಇದ್ದೀ. 18 ನೀನು ಐಶ್ವರ್ಯವಂತ ನಾಗುವ ಹಾಗೆ ಬೆಂಕಿಯಲ್ಲಿ ಶೋಧಿಸಿದ ಚಿನ್ನವನ್ನೂ ಲಜ್ಜಾಸ್ಪದವಾದ ನಿನ್ನ ಬೆತ್ತಲೆತನ ಕಾಣಿಸದಂತೆ ಹೊದ್ದು ಕೊಳ್ಳುವದಕ್ಕಾಗಿ ಬಿಳೀ ವಸ್ತ್ರವನ್ನೂ ಕಣ್ಣು ಕಾಣುವಂತೆ ನಿನ್ನ ಕಣ್ಣುಗಳಿಗೆ ಹಚ್ಚುವದಕ್ಕಾಗಿ ಅಂಜನವನ್ನೂ ನನ್ನಿಂದ ಕೊಂಡುಕೊಳ್ಳಬೇಕೆಂದು ನಿನಗೆ ಬುದ್ಧಿ ಹೇಳುತ್ತೇ 19 ನಾನು ಯಾರಾರನ್ನು ಪ್ರೀತಿಸುತ್ತೇನೋ ಅವರನ್ನು ಗದರಿಸುತ್ತೇನೆ ಮತ್ತು ಶಿಕ್ಷಿಸುತ್ತೇನೆ; ಆದದರಿಂದ ನೀನು ಆಸಕ್ತನಾಗಿರು; ಮಾನಸಾಂತರಪಡು.

2 ಕೊರಿಂಥದವರಿಗೆ 7:10 ದೇವರ ಚಿತ್ತಾನುಸಾರ ವಾಗಿರುವ ದುಃಖವು ರಕ್ಷಣೆಗಾಗಿ ಮಾನಸಾಂತರ ವನ್ನುಂಟು ಮಾಡುತ್ತದೆ. ಮಾನಸಾಂತರದಲ್ಲಿ ಪಶ್ಚಾತ್ತಾಪಕ್ಕೆ ಅಸ್ಪದವಿಲ್ಲ; ಆದರೆ ಲೋಕಸಂಬಂಧ ವಾದ ದುಃಖವು ಮರಣವನ್ನುಂಟುಮಾಡುತ್ತದೆ.

1 ಅರಸುಗಳು 18:37 ನೀನು ದೇವರಾದ ಕರ್ತನೆಂದೂ ನೀನು ಅವರ ಹೃದಯವನ್ನು ಮರಳಿ ತಿರಿಗಿಸುತ್ತಿ ಎಂದೂ ಈ ಜನವು ತಿಳಿಯುವ ಹಾಗೆ ನನಗೆ ಉತ್ತರಕೊಡು, ಓ ಕರ್ತನೇ, ನನಗೆ ಉತ್ತರಕೊಡು ಎಂದು ಬೇಡಿದನು.

2 ಕೊರಿಂಥದವರಿಗೆ 4:4 ದೇವರ ಪ್ರತಿರೂಪವಾಗಿರುವ ಕ್ರಿಸ್ತನ ಪ್ರಭಾವವನ್ನು ತೋರಿಸುವ ಮಹಿಮೆಯ ಸುವಾರ್ತೆಯು ಇವರಲ್ಲಿ ಪ್ರಕಾಶಿಸಬಾರದೆಂದು ಈ

ಪ್ರಪಂಚದ ದೇವರು ನಂಬಿಕೆಯಿಲ್ಲದವರ ಮನಸ್ಸನ್ನು ಮಂಕುಮಾಡಿದ್ದಾನೆ.

ಲೂಕನು 8:11-15 ಆ ಸಾಮ್ಯವು ಇದೇ; ಬೀಜವು ದೇವರ ವಾಕ್ಯವೇ. 12 ವಾಕ್ಯವನ್ನು ಕೇಳಿದವರು ನಂಬಿ ರಕ್ಷಣೆಹೊಂದಿಕೊಳ್ಳದಂತೆ ಸೈತಾನನು ಬಂದು ಅವರ ಹೃದಯದೊಳಗಿಂದ ಆ ವಾಕ್ಯವನ್ನು ತೆಗೆದು ಬಿಡುವನು. ಇವರೇ ಆ ದಾರಿಯ ಮಗ್ಗುಲಾಗಿ ರುವವರು. 13 ಬಂಡೆಯ ನೆಲದವರು ಯಾರಂದರೆ, ಅವರು ವಾಕ್ಯವನ್ನು ಕೇಳಿದಾಗ ಸಂತೋಷದಿಂದ ಅಂಗೀಕರಿಸುವರು; ಇವರು ಬೇರಿಲ್ಲದಿರುವದರಿಂದ ಸ್ವಲ್ಪಕಾಲ ನಂಬಿ ಶೋಧನೆ ಬಂದಾಗ ಬಿದ್ದು ಹೋಗುವರು. 14 ಮುಳ್ಳುಗಳ ಮಧ್ಯದಲ್ಲಿ ಬಿದ್ದ ಬೀಜದವರು ಯಾರಂದರೆ ಅವರು ಕೇಳಿದ ಮೇಲೆ ಮುಂದರಿದು ಈ ಜೀವನದ ಚಿಂತೆಗಳಿಂದಲೂ ಐಶ್ವರ್ಯಗಳಿಂದಲೂ ಭೋಗಗಳಿಂದಲೂ ಅಡಗಿಸ ಲ್ಪಟ್ಟು ಪರಿಪೂರ್ಣವಾಗಿ ಫಲಿಸದವರು. 15 ಆದರೆ ಒಳ್ಳೇ ಭೂಮಿಯವರು ಯಾರಂದರೆ ಯಥಾರ್ಥವಾದ ಒಳ್ಳೇ ಹೃದಯದಿಂದ ವಾಕ್ಯವನ್ನು ಕೇಳಿ ಅದನು ಕೈಕೊಂಡು ತಾಳ್ಮೆಯಿಂದ ಫಲಿಸುವವರೇ.

ಅಪೊಸ್ತಲರ ಕೃತ್ಯಗ 15:11 ಕರ್ತನಾದ ಯೇಸು ಕ್ರಿಸ್ತನ ಕೃಪೆಯಿಂದಲೇ ನಾವು ರಕ್ಷಣೆ ಹೊಂದುವೆವೆಂಬದಾಗಿ ನಂಬುತ್ತೇವಲ್ಲಾ; ಹಾಗೆಯೇ ಅವರೂ ಹೊಂದುವರು ಎಂದು ಹೇಳಿ ದನು.

ರೋಮಾಪುರದವರಿಗೆ 8:13 ನೀವು ಶರೀರಭಾವವನ್ನು ಅನುಸರಿಸಿದರೆ ಸಾಯುವಿರಿ; ಆದರೆ ನೀವು ಆತ್ಮನಿಂದ ದೇಹದ ಕ್ರಿಯೆಗಳನ್ನು ಸಾಯಿಸುವದಾದರೆ ಜೀವಿಸುವಿರಿ.

Pastor T. John Franklin
Church of Salvation, Healing, and Deliverance
COS-HAD.org